## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 418 |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 30.01.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪಿ.ಡಿ.ಓ ಹುದ್ದೆಗಳು ಎಷ್ಟು; | ರಾಜ್ಯದ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಒಟ್ಟು 994 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಖಾಲಿ ಇರುತ್ತವೆ. |
| (ಆ) | ಇವುಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಕ್ರಮ ವಹಿಸಲಾಗುತ್ತಿದೆಯೇ; ಇಲ್ಲದಿದ್ದಲ್ಲಿ ಪಿ.ಡಿ.ಓ ನೇಮಕಾತಿ ಮಾಡಿಕೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು; | ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 247 ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ದಿನಾಂಕ:15.03.2024 ರಂದು ಅಧಿಸೂಚನೆಯನ್ನು ಮತ್ತು 17-09-2024 ರಲ್ಲಿ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಲಾಗಿರುತ್ತದೆ.<br><br>ಕಲ್ಯಾಣ ಕರ್ನಾಟಕ ವೃಂದದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಲು ಬಾಕಿ ಇರುತ್ತದೆ. ಉಳಿಕೆ ಮೂಲ ವೃಂದದ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲು ಬಾಕಿ ಇದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ದಿನಾಂಕ:01.01.2025 ರಲ್ಲಿದ್ದಂತೆ ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ರಾಜ್ಯ ಮಟ್ಟದ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ಅಭ್ಯರ್ಥಿಗಳಿಂದ ಮುಂಬಡ್ತಿ ನೀಡಲು ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| (ಇ) | ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಕೆಲಸ ಮಾಡುತ್ತಿದ್ದು, ಪಿಡಿಒ ಹುದ್ದೆಗಳು ಖಾಲಿ ಇರುವುದರಿಂದ ಈ ಸೇವೆಗಳು ಸಾರ್ವಜನಿಕರಿಗೆ ಸಮರ್ಪಕವಾಗಿ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಶೀಘ್ರವಾಗಿ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ವಹಿಸುವುದೇ? | ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಸಾರ್ವಜನಿಕರ ದಿನ ನಿತ್ಯದ ಕೆಲಸಗಳಿಗೆ/ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆ ಉಂಟಾಗದಂತೆ ಮತ್ತು ಆಡಳಿತ ಸುಗಮವಾಗಿ ನಡೆಸಲು ಗ್ರಾಮ ಪಂಚಾಯತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆ ಖಾಲಿ ಇರುವ ಸಂದರ್ಭದಲ್ಲಿ ಅದೇ ಗ್ರಾಮ ಪಂಚಾಯತಿಯ ಗ್ರೇಡ್-1 ಕಾರ್ಯದರ್ಶಿಗಳಿಗೆ ಪ್ರಭಾರವನ್ನು ವಹಿಸಲು ಅಗತ್ಯ ಕ್ರಮ ವಹಿಸಲು ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 384 ಗ್ರಾಪಂಕಾ 2018(ಭಾಗ-1) ದಿನಾಂಕ:23.11.2018 ರಲ್ಲಿ ನಿರ್ದೇಶನ ನೀಡಲಾಗಿದೆ. |

ಸಂಖ್ಯೆ: ಗ್ರಾಅಪ 102 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.